3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No. 390/2019**

ಪ್ರಾ.ಸಾ 2

| | |
|---|---|
| ಹೆಸರು | ಭೈರೇಗೌಡ ಜಿ.ಎಸ್ . |
| ತಂದೆಯ ಹೆಸರು | ಶಿವರಾಮಯ್ಯ |
| ವಯಸ್ಸು | 33 ವರ್ಷ |
| ಉದ್ಯೋಗ | ಪಿಎಸ್ಐ, ಹೆಬ್ಬೂರು ಪೋ.ಠಾಣೆ |
| ವಾಸಸ್ಥಳ | ಹೆಬ್ಬೂರು |

ಸಾಕ್ಷಿಯನ್ನು ದಿನಾಂಕ 04.07.2025 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ** (ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿಯ ವಿಚಾರಣೆ)

1) ದಿಃ 13.07.2023 ರಿಂದ ಹೆಬ್ಬೂರು ಪೋ.ಠಾಣೆಯಲ್ಲಿ ನಾನು ಪಿಎಸ್ಐ ಆಗಿ ಕರ್ತವ್ಯವನ್ನು ನಿರ್ವಹಿಸುತ್ತಿದ್ದೇನೆ.

2) ದಿನಾಂಕ 25.07.2024 ರಂದು ಆರೋಪಿ ಕುಮಾರ್ ರವರ ಆಸ್ತಿಗಳನ್ನು ಜಪ್ತಿ ಮಾಡುವಂತೆ ವಾರಂಟ್ ನ್ನು ಮಾನ್ಯ ನ್ಯಾಯಾಲಯದಿಂದ ಪಡೆದುಕೊಂಡಿರುತ್ತೇನೆ. ನಂತರ 29.07.2024 ರಂದು ಆರೋಪಿಯ ಆಸ್ತಿ ವಿವರಗಳನ್ನು ನೀಡುವಂತೆ ಗಂಗೋನಹಳ್ಳಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗೆ ಮನವಿಯನ್ನು ಸಲ್ಲಿಸಿರುತ್ತೇನೆ.

3) ದಿಃ17.08.2024 ರಂದು ಸದರಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಯು ಆರೋಪಿಯ ಹೆಸರಿನಲ್ಲಿ ಯಾವುದೇ ಚರಾಸ್ತಿ ಮತ್ತು ಸ್ಥಿರಾಸ್ತಿ ಇರುವುದಿಲ್ಲ ಎಂದು ಮಾಹಿತಿಯನ್ನು ಕೊಟ್ಟಿರುತ್ತಾರೆ. ಅದನ್ನು ನಿಪಿ.3 ಎಂದು, ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ಈ ಬಗ್ಗೆ ನ್ಯಾಯಾಲಯಕ್ಕೆ ನಮ್ಮಠಾಣೆಯ ಸಹಾಯಕ ಆರಕ್ಷಕ ಉಪನಿರೀಕ್ಷಕರು ವರದಿಯನ್ನು ಸಲ್ಲಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಒ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ